KA/ BG-GPO / 2515 / WPP-47 / 2009-2011

ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ಸಂಪುಟ ೧೪೫	ಬೆಂಗಳೂರು, ಗುರುವಾರ, ಡಿಸೆಂಬರ್ ೩೦, ೨೦೧೦ (ಪುಷ್ಯ ೯, ಶಕ ವರ್ಷ ೧೯೩೨)	ಸಂಚಿಕೆ ೫೧

ಭಾಗ – ೨

ನೇಮಕಗಳು, ಸ್ಥಳ ನೇಮಕಗಳು, ವರ್ಗಾವಣೆಗಳು, ರಜೆ ಮತ್ತು ಅಧಿಕಾರಿಗಳು, ಕರ್ನಾಟಕ ಉಚ್ಚ ನ್ಯಾಯಾಲಯದ ಅಧಿಸೂಚನೆಗಳು

ಕಾರ್ಮಿಕ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಕಾಇ 223 ಐಡಿಎಂ 2009, ಬೆಂಗಳೂರು, ದಿನಾಂಕ: 25ನೇ ನವೆಂಬರ್, 2010

ಅಧ್ಯಕ್ಷಾಧಿಕಾರಿಗಳು, ಕಾರ್ಮಿಕ ನ್ಯಾಯಾಲಯ, ಮೈಸೂರು ಇವರನ್ನು ಶ್ರೀ ವೈ.ಎನ್. ಕರಗುದರಿ, ಇವರ ವರ್ಗಾವಣೆಯಿಂದಾಗಿ ತೆರವಾಗಿರುವ ಅಧ್ಯಕ್ಷಾಧಿಕಾರಿಗಳು, ಕಾರ್ಮಿಕ ನ್ಯಾಯಾಲಯ, ಕೊಡಗು, ಮಡಿಕೇರಿ ಇಲ್ಲಿಗೆ ಸದರಿಯವರು ಕರ್ತವ್ಯದಿಂದ ವಿಮುಕ್ತಿ ಹೊಂದಿದ ದಿನಾಂಕದಿಂದ ಹಾಗೂ ಮುಂದಿನ ಆದೇಶದವರೆಗೆ ಸಮವರ್ತಿ ಪ್ರಭಾರದಲ್ಲಿರಿಸಿ ನೇಮಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,
ಗೋವಿಂದಸ್ವಾಮಿ,
ಪೀಠಾಧಿಕಾರಿ,
ಕಾರ್ಮಿಕ ಇಲಾಖೆ,
(ಕಾರಾವಿ ಯೋ (ವೈ) ಸೇವೆಗಳು)

ಪಿ.ಆರ್. 1703

ಕನ್ನಡ, ಸಂಸ್ಕೃತಿ, ವಾರ್ತಾ ಮತ್ತು ಪ್ರವಾಸೋದ್ಯಮ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಕಸಂವಾಪ್ರ 61 ಪ್ರವಾನಿ 2010, ಬೆಂಗಳೂರು, ದಿನಾಂಕ: 22ನೇ ನವೆಂಬರ್, 2010

ಶ್ರೀ ಎಂ.ಕೆ. ಪ್ರಾಣೇಶ್, ಚಿಕ್ಕಮಗಳೂರು ಇವರನ್ನು ಅರಣ್ಯ ವಸತಿ ಮತ್ತು ವಿಹಾರಧಾಮಗಳ ಸಂಸ್ಥೆ ಇಲ್ಲಿನ ಖಾಲಿ ಇರುವ ಅಧ್ಯಕ್ಷರ ಸ್ಥಾನದಲ್ಲಿ ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಅಧ್ಯಕ್ಷರನ್ನಾಗಿ ನೇಮಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,
ಎಸ್. ನಾರಾಯಣಪ್ಪ,
ಸರ್ಕಾರದ ಅಧೀನ ಕಾರ್ಯದರ್ಶಿ,
ಕನ್ನಡ, ಸಂಸ್ಕೃತಿ, ವಾರ್ತಾ ಮತ್ತು ಪ್ರವಾಸೋದ್ಯಮ ಇಲಾಖೆ.

ಪಿ.ಆರ್. 1704

ಇಂಧನ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಇಎನ್ 98 ಸಮನ್ವಯ 2010, ಬೆಂಗಳೂರು, ದಿನಾಂಕ: 25ನೇ ನವೆಂಬರ್, 2010

ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಸಂಖ್ಯೆ : ಡಿಪಿಎಆರ್ 604 ಎಸ್‌ಎಎಸ್ 2010(ಪಿ) ದಿನಾಂಕ : 10–11–2010ರ ಅಧಿಸೂಚನೆಯಲ್ಲಿ ಶ್ರೀ ಪಂಕಜ್ ಕುಮಾರ್ ಪಾಂಡೆ ಭಾ.ಆ.ಸೇ. (ಕೆಎನ್ 2000) ಜಿಲ್ಲಾಧಿಕಾರಿ, ಶಿವಮೊಗ್ಗ ಜಿಲ್ಲೆ ಇವರನ್ನು ವ್ಯವಸ್ಥಾಪಕ ನಿರ್ದೇಶಕರು, ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ ನಿಯಮಿತ, ಹುಬ್ಬಳ್ಳಿ ಇಲ್ಲಿಗೆ ವರ್ಗಾಯಿಸಿ ನೇಮಿಸಿದ್ದರ ಹಿನ್ನೆಲೆಯಲ್ಲಿ ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ ನಿಯಮಿತದ ಮೆಮೊರ್‍ಯಾಂಡಮ್ ಆಫ್ ಅಸೋಸಿಯೇಷನ್ ಮತ್ತು ಆರ್ಟಿಕಲ್ಸ್ ಆಫ್ ಅಸೋಸಿಯೇಷನ್‌ನ ಆರ್ಟಿಕಲ್ 74(ಬಿ) ಮತ್ತು 74(ಎ)ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಶ್ರೀ ಪಂಕಜ್ ಕುಮಾರ್ ಪಾಂಡೆ ಭಾ.ಆ.ಸೇ. ಇವರನ್ನು ಹುಬ್ಬಳ್ಳಿ ವಿದ್ಯುತ್ ಸರಬರಾಜು

ಕಂಪನಿ ನಿಯಮಿತದ ನಿರ್ದೇಶಕರ ಮಂಡಳಿಯ ನಿರ್ದೇಶಕರನ್ನಾಗಿ ಹಾಗೂ ವ್ಯವಸ್ಥಾಪಕ ನಿರ್ದೇಶಕರನ್ನಾಗಿ ದಿನಾಂಕ : 11–11–2010ರಿಂದಲೇ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ನೇಮಕ ಮಾಡಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,
ಸುರೇಶ್.ಬಿ.ಕೃಷ್ಣಪ್ಪನವರ್,
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ

ಪಿ.ಆರ್. 1705

ಅಧಿಸೂಚನೆ

ಸಂಖ್ಯೆ: ಇಎನ್ 98 ಸಮನ್ವಯ 2010, ಬೆಂಗಳೂರು, ದಿನಾಂಕ: 25ನೇ ನವೆಂಬರ್, 2010

ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಸಂಖ್ಯೆ : ಡಿಪಿಎಆರ್ 604 ಎಸ್ಎಎಸ್ 2010 ದಿನಾಂಕ : 21–10–2010ರ ಅಧಿಸೂಚನೆಯಲ್ಲಿ ಶ್ರೀ ಪಿ. ಮಣಿವಣ್ಣನ್, ಭಾ.ಆ.ಸೇ. (ಕೆಎನ್ 98) ರೇಷ್ಮೆ ಕೃಷಿ ಅಭಿವೃದ್ಧಿ ಆಯುಕ್ತರು ಹಾಗೂ ರೇಷ್ಮೆ ನಿರ್ದೇಶಕರು ಇವರನ್ನು ವ್ಯವಸ್ಥಾಪಕ ನಿರ್ದೇಶಕರು, ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ ನಿಯಮಿತ, ಬೆಂಗಳೂರು ಇಲ್ಲಿಗೆ ವರ್ಗಾಯಿಸಿ ನೇಮಿಸಿರುತ್ತಾರೆ.

ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ ನಿಯಮಿತದ ಮೆಮೊರ್ಯಾಂಡಮ್ ಆಫ್ ಅಸೋಸಿಯೇಷನ್ ಮತ್ತು ಆರ್ಟಿಕಲ್ಸ್ ಆಫ್ ಅಸೋಸಿಯೇಷನ್‌ನ ಆರ್ಟಿಕಲ್ 74(ಎ)&(ಬಿ)ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಶ್ರೀ ಪಿ. ಮಣಿವಣ್ಣನ್, ಭಾ.ಆ.ಸೇ., ವ್ಯವಸ್ಥಾಪಕ ನಿರ್ದೇಶಕರು, ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ ನಿಯಮಿತ ಇವರನ್ನು ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ ನಿಯಮಿತದ ನಿರ್ದೇಶಕರ ಮಂಡಳಿಯ ನಿರ್ದೇಶಕರನ್ನಾಗಿ ಹಾಗೂ ವ್ಯವಸ್ಥಾಪಕ ನಿರ್ದೇಶಕರನ್ನಾಗಿ ವರದಿ ಮಾಡಿಕೊಂಡ ದಿನಾಂಕದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ನೇಮಕ ಮಾಡಲಾಗಿದೆ.

ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಬೆಂಗಳೂರು ಇದರ ಮೆಮೊರಾಂಡಂ ಆಫ್ ಅಸೋಸಿಯೇಷನ್ ಅಂಡ್ ಆರ್ಟಿಕಲ್ಸ್ ಆಫ್ ಅಸೋಸಿಯೇಷನ್‌ನ ಆರ್ಟಿಕಲ್ 30(1)(ಎ)ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಶ್ರೀ ಪಿ. ಮಣಿವಣ್ಣನ್, ಭಾ.ಆ.ಸೇ., ವ್ಯವಸ್ಥಾಪಕ ನಿರ್ದೇಶಕರು, ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ ನಿಯಮಿತ ಇವರನ್ನು ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದ ನಿರ್ದೇಶಕರ ಮಂಡಳಿಯ ನಿರ್ದೇಶಕರನ್ನಾಗಿ (ವರ್ಗಾವಣೆ ಹೊಂದಿರುವ ಶ್ರೀ ತುಷಾರ್ ಗಿರಿನಾಥ್ ಭಾ.ಆ.ಸೇ. ರವರ ಜಾಗದಲ್ಲಿ) ವರದಿ ಮಾಡಿಕೊಂಡ ದಿನಾಂಕದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ನೇಮಕ ಮಾಡಲಾಗಿದೆ.

ಪವರ್ ಕಂಪನಿ ಆಫ್ ಕರ್ನಾಟಕ ಲಿಮಿಟೆಡ್, ಬೆಂಗಳೂರು ಇದರ ಮೆಮೊರಾಂಡಂ ಆಫ್ ಅಸೋಸಿಯೇಷನ್ ಅಂಡ್ ಆರ್ಟಿಕಲ್ಸ್ ಆಫ್ ಅಸೋಸಿಯೇಷನ್‌ನ ಆರ್ಟಿಕಲ್ 93(ಎ)ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಶ್ರೀ ಪಿ. ಮಣಿವಣ್ಣನ್, ಭಾ.ಆ.ಸೇ., ವ್ಯವಸ್ಥಾಪಕ ನಿರ್ದೇಶಕರು, ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ ನಿಯಮಿತ ಇವರನ್ನು ಪವರ್ ಕಂಪನಿ ಆಫ್ ಕರ್ನಾಟಕ ಲಿಮಿಟೆಡ್‌ನ ನಿರ್ದೇಶಕರ ಮಂಡಳಿಯ ನಿರ್ದೇಶಕರನ್ನಾಗಿ (ವರ್ಗಾವಣೆ ಹೊಂದಿರುವ ಶ್ರೀ ತುಷಾರ್ ಗಿರಿನಾಥ್ ಭಾ.ಆ.ಸೇ. ರವರ ಜಾಗದಲ್ಲಿ) ವರದಿ ಮಾಡಿಕೊಂಡ ದಿನಾಂಕದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ನೇಮಕ ಮಾಡಲಾಗಿದೆ.

ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ಇದರ ಮೆಮೊರ್ಯಾಡಂಮ್ ಆಫ್ ಅಸೋಸಿಯೇಷನ್ ಮತ್ತು ಆರ್ಟಿಕಲ್ಸ್ ಆಫ್ ಅಸೋಸಿಯೇಷನ್‌ನ ಆರ್ಟಿಕಲ್ 51(ಎ)ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಶ್ರೀ ಪಿ. ಮಣಿವಣ್ಣನ್, ಭಾ.ಆ.ಸೇ., ವ್ಯವಸ್ಥಾಪಕ ನಿರ್ದೇಶಕರು, ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ ನಿಯಮಿತ ಇವರನ್ನು ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ನಿರ್ದೇಶಕರ ಮಂಡಳಿಯ ನಿರ್ದೇಶಕರನ್ನಾಗಿ (ವರ್ಗಾವಣೆ ಹೊಂದಿರುವ ಶ್ರೀ ತುಷಾರ್ ಗಿರಿನಾಥ್ ಭಾ.ಆ.ಸೇ. ರವರ ಜಾಗದಲ್ಲಿ) ವರದಿ ಮಾಡಿಕೊಂಡ ದಿನಾಂಕದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ನೇಮಕ ಮಾಡಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,
ಸುರೇಶ್.ಬಿ.ಕೃಷ್ಣಪ್ಪನವರ್,
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ

ಪಿ.ಆರ್. 1706

ವಾಣಿಜ್ಯ ಮತ್ತು ಕೈಗಾರಿಕಾ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ವಾಕೈ 100 ಸಸಕಾ 2010, ಬೆಂಗಳೂರು, ದಿನಾಂಕ: 30ನೇ ನವೆಂಬರ್, 2010

ಸಹಕಾರ ಇಲಾಖೆಯ ದಿನಾಂಕ 16–11–2010ರ ಸಇ 210 ಎಸಸೇ 2010ನೇ ಸಂಖ್ಯೆಯ ಅಧಿಸೂಚನೆ ಮೂಲಕ ಸಹಕಾರ ಸಂಘಗಳ ಅಪರ ನಿಬಂಧಕರಾದ ಶ್ರೀ ಕೆ. ನಾಗರಾಜ್‌ರವರನ್ನು ಕರ್ನಾಟಕ ರಾಜ್ಯ ಸಹಕಾರ ಸಕ್ಕರೆ ಮಹಾಮಂಡಳದ ವ್ಯವಸ್ಥಾಪಕ ನಿರ್ದೇಶಕರ ಹುದ್ದೆಗೆ ನೇಮಿಸಿ ಇವರ ಸೇವೆಯನ್ನು ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಯ ವಶಕ್ಕೆ ನೀಡಲಾಗಿರುತ್ತದೆ.

ಮೇಲ್ಕಂಡ ಅಧಿಸೂಚನೆಯನ್ವಯ ಸಹಕಾರ ಸಂಘಗಳ ಅಪರ ನಿಬಂಧಕರಾದ ಶ್ರೀ ಕೆ. ನಾಗರಾಜ್‌ರವರನ್ನು ಕರ್ನಾಟಕ ರಾಜ್ಯ ಸಹಕಾರ ಸಕ್ಕರೆ ಮಹಾಮಂಡಳದ ವ್ಯವಸ್ಥಾಪಕ ನಿರ್ದೇಶಕರ ಹುದ್ದೆಗೆ, ಕೂಡಲೇ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ, ಪುನರ್ ನೇಮಕಾತಿ ಮಾಡಿ ಆದೇಶಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,
ಸಿ. ಶ್ರೀನಿವಾಸ್,
ಸರ್ಕಾರದ ಅಧೀನ ಕಾರ್ಯದರ್ಶಿ,
ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆ (ಸಹಕಾರಿ ಸಕ್ಕರೆ)

ಪಿ.ಆರ್. 1707

ಅಧಿಸೂಚನೆ

ಸಂಖ್ಯೆ: ವಾಕೈ 96 ಸಸಕಾ 2010, ಬೆಂಗಳೂರು, ದಿನಾಂಕ: 30ನೇ ನವೆಂಬರ್, 2010

ಸಹಕಾರ ಇಲಾಖೆಯ ದಿನಾಂಕ 23–10–2010ರ ಸಇ 9 ಎಸಸೇ 2010ನೇ ಸಂಖ್ಯೆಯ ಅಧಿಸೂಚನೆ ಮೂಲಕ ಸಹಕಾರ ಸಂಘಗಳ ಅಪರ ನಿಬಂಧಕರಾದ ಶ್ರೀ ಬಿ. ಸಿ. ಕುರಬೇಟರವರನ್ನು ಶ್ರೀ ಸೋಮೇಶ್ವರ ಸಹಕಾರಿ ಸಕ್ಕರೆ ಕಾರ್ಖಾನೆ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರ ಹುದ್ದೆಗೆ ನೇಮಿಸಿ ಇವರ ಸೇವೆಯನ್ನು ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಯ ವಶಕ್ಕೆ ನೀಡಲಾಗಿರುತ್ತದೆ.

ಮೇಲ್ಕಂಡ ಅಧಿಸೂಚನೆಯನ್ವಯ ಸಹಕಾರ ಸಂಘಗಳ ಅಪರ ನಿಬಂಧಕರಾದ ಶ್ರೀ ಬಿ. ಸಿ. ಕುರಬೇಟರವರನ್ನು ಶ್ರೀ ಸೋಮೇಶ್ವರ ಸಹಕಾರಿ ಸಕ್ಕರೆ ಕಾರ್ಖಾನೆ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರ ಹುದ್ದೆಗೆ, ಕೂಡಲೇ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ, ಪುನರ್ ನೇಮಕಾತಿ ಮಾಡಿ ಆದೇಶಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,
ಸಿ. ಶ್ರೀನಿವಾಸ್,
ಸರ್ಕಾರದ ಅಧೀನ ಕಾರ್ಯದರ್ಶಿ,
ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆ. (ಸಹಕಾರಿ ಸಕ್ಕರೆ)

ಪಿ.ಆರ್. 1708

ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಸಿಆಸುಇ 268 ಆಸೇವ 2010, ಬೆಂಗಳೂರು, ದಿನಾಂಕ: 27ನೇ ನವೆಂಬರ್, 2010

ಶ್ರೀ ಬಿ. ಎಸ್. ಶೇಖರಪ್ಪ, ಕೆ.ಎ.ಎಸ್. (ಆಯ್ಕೆ ಶ್ರೇಣಿ) ಅಧಿಕಾರಿ, ಮುಖ್ಯ ಆಡಳಿತಾಧಿಕಾರಿಗಳು, ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು ಇವರನ್ನು ಸಾರ್ವಜನಿಕ ಹಿತದೃಷ್ಟಿಯಿಂದ ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್, ಚಿಕ್ಕಬಳ್ಳಾಪುರ ಜಿಲ್ಲೆ–ಖಾಲಿ ಹುದ್ದೆಗೆ ವರ್ಗಾಯಿಸಿ ನೇಮಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,
ಎಂ. ವಾಸುದೇವಮೂರ್ತಿ,
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಸೇವೆಗಳು–2)

ಪಿ.ಆರ್. 1709

ಕಂದಾಯ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಕಂಇ 73 ಎಟಿಎಸ್ 2010, ಬೆಂಗಳೂರು, ದಿನಾಂಕ: 20ನೇ ನವೆಂಬರ್, 2010

ಶ್ರೀ ಔದರಾಮ್, ತಹಶೀಲ್ದಾರ್, ಗೋಕಾಕ್ ತಾಲ್ಲೂಕು ಬೆಳಗಾಂ ಜಿಲ್ಲೆ ಇವರನ್ನು ಶ್ರೀ ಮಂಜುನಾಥ ಬಳ್ಳಾರಿ, ತಹಶೀಲ್ದಾರ್, ಯಲ್ಲಾಪುರ ತಾಲ್ಲೂಕು, ಉತ್ತರ ಕನ್ನಡ ಜಿಲ್ಲೆ ಇವರ ವರ್ಗಾವಣೆಯಿಂದ ತೆರವಾದ ಹುದ್ದೆಗೆ ಈ ಕೂಡಲೇ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಆಡಳಿತ ಹಿತದೃಷ್ಠಿಯಿಂದ ವರ್ಗಾಯಿಸಿ ನೇಮಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,
ಎಂ. ಎಸ್. ದೇಸಾಯಿ,
ಸರ್ಕಾರದ ಉಪ ಕಾರ್ಯದರ್ಶಿ,
ಕಂದಾಯ ಇಲಾಖೆ (ಸೇವೆಗಳು ಮತ್ತು ವಿಪತ್ತು ನಿರ್ವಹಣೆ).

ಪಿ.ಆರ್. 1710

ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಸಂವ್ಯಶಾಇ 39 ಭಾನಿವಿ 2010, ಬೆಂಗಳೂರು, ದಿನಾಂಕ: 26ನೇ ನವೆಂಬರ್, 2010

ಶ್ರೀ ಹೆಚ್.ಪಿ. ದಾಮೋದರ್, ಉಪನಿರ್ದೇಶಕರು, ಭಾಷಾಂತರ ನಿರ್ದೇಶನಾಲಯ ಸೇವೆ (ಪ್ರಸ್ತುತ ಕರ್ನಾಟಕ ಸರ್ಕಾರ ಸಚಿವಾಲಯದ ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆಯ ಕನ್ನಡ ಪ್ರಾರೂಪಣಾ ವಿಭಾಗದಲ್ಲಿ ನಿಯೋಜನೆ ಮೇಲಿರುವ)

ಇವರಿಗೆ ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ ನಿಯಮ 285(1)(ಎ)ರ ಅನ್ವಯ ದಿನಾಂಕ: 30–11–2010ರಿಂದ ಜಾರಿಗೆ ಬರುವಂತೆ ಸರ್ಕಾರಿ ಸೇವೆಯಿಂದ ಸ್ವ–ಇಚ್ಚಾ ನಿವೃತ್ತಿ ಹೊಂದಲು ಅನುಮತಿ ನೀಡಲಾಗಿದೆ. ಸದರಿಯವರನ್ನು ದಿನಾಂಕ: 30–11–2010ರ ಅಪರಾಹ್ನದಂದು ಕಾರ್ಯ ಬಿಡುಗಡೆ ಮಾಡುವಂತೆ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,
ರಿಚಾರ್ಡ್ ಲೋಬೊ,
ಜಂಟಿ ಪ್ರಾರೂಪಕಾರ ಮತ್ತು ಪದನಿಮಿತ್ತ
ಸರ್ಕಾರದ ಜಂಟಿ ಕಾರ್ಯದರ್ಶಿ,
ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆ.

ಪಿ.ಆರ್. 1711

ಯುವಜನ ಸೇವಾ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಯುಸೇಇ 150 ಯುಇಸೇ 2010, ಬೆಂಗಳೂರು, ದಿನಾಂಕ: 27ನೇ ನವೆಂಬರ್, 2010

ಶ್ರೀ ಎಂ.ವಿ. ಶ್ರೀನಿವಾಸ, ಉಪನಿರ್ದೇಶಕರು, ಯುವಜನ ಸೇವಾ ಮತ್ತು ಕ್ರೀಡಾ ಇಲಾಖೆ, ಬೆಂಗಳೂರು, ಇವರನ್ನು ದಿನಾಂಕ: 31–12–2010ರ ಅಪರಾಹ್ನದಿಂದ ಜಾರಿಗೆ ಬರುವಂತೆ ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಯ ನಿಯಮ 95 ಹಾಗೂ 283ರನ್ವಯ ಸರ್ಕಾರಿ ಸೇವೆಯಿಂದ ವಯೋನಿವೃತ್ತಿ ಹೊಂದಲು ಈ ಮೂಲಕ ಅನುಮತಿ ನೀಡಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,
ಎಂ.ಎಸ್.ಶಿವರಾಮ್,
ಸರ್ಕಾರದ ಅಧೀನ ಕಾರ್ಯದರ್ಶಿ,
ಯುವಜನ ಸೇವಾ ಇಲಾಖೆ.

ಪಿ.ಆರ್. 1712

ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಸಿಆಸುಇ 60 ಸೇಉನ್ಯಾ 2010(2), ಬೆಂಗಳೂರು, ದಿನಾಂಕ: 29ನೇ ನವೆಂಬರ್, 2010

ಕರ್ನಾಟಕ ಉಚ್ಚ ನ್ಯಾಯಾಲಯದ ಅಧಿಸೂಚನೆ ಸಂಖ್ಯೆ: ಜಿಓಬಿ(1)1/2010, ದಿನಾಂಕ: 11–11–2010ರಲ್ಲಿ ಈ ಕೆಳಕಂಡ ನ್ಯಾಯಾಧೀಶರನ್ನು ಅವರ ಹೆಸರಿನ ಮುಂದೆ ಸೂಚಿಸಿರುವ ಸ್ಥಾನಕ್ಕೆ ವರ್ಗಾಯಿಸಲು ಆದೇಶಿಸಲಾಗಿದೆ. ಉಚ್ಚನ್ಯಾಯಾಲಯದ ರಿಜಿಸ್ಟ್ರಾರ್ ಜನರಲ್‌ರವರು ಸದರೀ ಅಧಿಸೂಚನೆಯನ್ನು ಉಲ್ಲೇಖಿಸಿ ಅದರಂತೆ ಸೂಕ್ತ ಆದೇಶ ಹೊರಡಿಸುವಂತೆ ಸರ್ಕಾರವನ್ನು ಕೋರಿರುತ್ತಾರೆ.

ಅದರಂತೆ ಸದರೀ ನ್ಯಾಯಾಧೀಶರಿಗೆ ಮರುನಿಯುಕ್ತಿ ಆದೇಶ ನೀಡುವ ಸಲುವಾಗಿ ಸದರಿಯವರ ಸೇವೆಯನ್ನು ಕಾರ್ಮಿಕ ಇಲಾಖೆಯ ವಶಕ್ಕೆ ನೀಡಲಾಗಿದೆ.

Sl.No	Name and Designation of the Officer	Post to which proposed for appointment
1.	Sri. P.N.Desai, District Judge, OOD, Senior Faculty Member, Karnataka Judical Academy, Bangalore	Proposed for appointment as Presiding Officer, Additional Industrial Tribunal, Bangalore City, (Vacant Post)

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,
ಎ.ಆರ್. ವಿಜಯಾನಂದ ಶರ್ಮ,
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಸೇವೆಗಳು–3)

ಪಿ.ಆರ್. 1713

ಅಧಿಸೂಚನೆ

ಸಂಖ್ಯೆ: ಸಿಆಸುಇ 60 ಸೇಉನ್ಯಾ 2010(3), ಬೆಂಗಳೂರು, ದಿನಾಂಕ: 29ನೇ ನವೆಂಬರ್, 2010

ಕರ್ನಾಟಕ ಉಚ್ಚ ನ್ಯಾಯಾಲಯದ ಅಧಿಸೂಚನೆ ಸಂಖ್ಯೆ: ಜಿಓಬಿ(1)1/2010, ದಿನಾಂಕ: 11–11–2010ರಲ್ಲಿ ಅಧ್ಯಕ್ಷಾಧಿಕಾರಿ, ಕಾರ್ಮಿಕ ನ್ಯಾಯಾಲಯ, ಮೈಸೂರು, ಇವರನ್ನು ಅಧ್ಯಕ್ಷಾಧಿಕಾರಿ, ಕಾರ್ಮಿಕ ನ್ಯಾಯಾಲಯ ಕೊಡಗು–ಮಡಿಕೇರಿ ಈ ಹುದ್ದೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಶ್ರೀ ವೈ.ಎನ್. ಕರಗುದರಿ, ಇವರು ಸದರೀ ಹುದ್ದೆಯಿಂದ ಬಿಡುಗಡೆಯಾದ ದಿನಾಂಕದಿಂದ ಜಾರಿಗೆ ಬರುವಂತೆ ಅಧ್ಯಕ್ಷಾಧಿಕಾರಿ, ಕಾರ್ಮಿಕ ನ್ಯಾಯಾಲಯ ಕೊಡಗು–ಮಡಿಕೇರಿ ಈ ಹುದ್ದೆಯಲ್ಲಿ ಸಮವರ್ತಿ ಪ್ರಭಾರದಲ್ಲಿರಿಸಲು ಸರ್ಕಾರವನ್ನು ಕೋರಲಾಗಿದೆ.

ಅದರಂತೆ, ಅಧ್ಯಕ್ಷಾಧಿಕಾರಿ, ಕಾರ್ಮಿಕ ನ್ಯಾಯಾಲಯ, ಮೈಸೂರು, ಇವರನ್ನು ಅಧ್ಯಕ್ಷಾಧಿಕಾರಿ, ಕಾರ್ಮಿಕ ನ್ಯಾಯಾಲಯ ಕೊಡಗು–ಮಡಿಕೇರಿ ಈ ಹುದ್ದೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಶ್ರೀ ವೈ.ಎನ್. ಕರಗುದರಿ, ಇವರು ಸದರೀ ಹುದ್ದೆಯಿಂದ ಬಿಡುಗಡೆಯಾದ ದಿನಾಂಕದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಅಧ್ಯಕ್ಷಾಧಿಕಾರಿ, ಕಾರ್ಮಿಕ ನ್ಯಾಯಾಲಯ ಕೊಡಗು–ಮಡಿಕೇರಿ ಈ ಹುದ್ದೆಯಲ್ಲಿ ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಯ ನಿಯಮ 66ರನ್ವಯ ಸಮವರ್ತಿ ಪ್ರಭಾರದಲ್ಲಿರಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,
ಎ.ಆರ್. ವಿಜಯಾನಂದ ಶರ್ಮ,
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಸೇವೆಗಳು–3)

ಪಿ.ಆರ್. 1714

ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಸಿಆಸುಇ 556 ಸಅಸೇ 2010, ಬೆಂಗಳೂರು, ದಿನಾಂಕ: 29ನೇ ನವೆಂಬರ್, 2010

ಶ್ರೀ ಈ. ಎನ್. ಚವಾಣ್, ಹಿಂದಿನ **ಮಾನ್ಯ ತೋಟಗಾರಿಕೆ ಮತ್ತು ಬಂಧೀಖಾನೆ ಸಚಿವರ ವಿಶೇಷ ಕರ್ತವ್ಯಾಧಿಕಾರಿಯಾಗಿ** ಗುತ್ತಿಗೆ ಆಧಾರದ ಮೇಲೆ ದಿನಾಂಕ 27–08–2008ರಿಂದ ಕರ್ತವ್ಯ ನಿರ್ವಹಿಸುತ್ತಿದ್ದು, ದಿನಾಂಕ 23–09–2010ರಿಂದ ಮಾನ್ಯ ತೋಟಗಾರಿಕೆ ಮತ್ತು ಬಂಧೀಖಾನೆ ಸಚಿವರ ಬದಲಾದ ಖಾತೆಯಾದ ಕೃಷಿ ಸಚಿವರ ವಿಶೇಷ ಕರ್ತವ್ಯಾಧಿಕಾರಿಯಾಗಿ ದಿನಾಂಕ 23–09–2010ರಿಂದಲೂ ಕರ್ತವ್ಯದಲ್ಲಿ ಮುಂದುವರೆದಿರುತ್ತಾರೆ. ಶ್ರೀ ಈ. ಎನ್. ಚವ್ಹಾಣ್ ಅವರ ಗುತ್ತಿಗೆ ನೇಮಕಾತಿಯ ಅಧಿಸೂಚನೆ ದಿನಾಂಕ 12–03–2009 ಹಾಗೂ ನೇಮಕಾತಿ ಷರತ್ತುಗಳಲ್ಲಿ ಯಾವುದೇ ಬದಲಾವಣೆ ಇರುವುದಿಲ್ಲ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,
ಎ.ಆರ್. ವಿಜಯಾನಂದ ಶರ್ಮ,
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಸೇವೆಗಳು–3)

ಪಿ.ಆರ್. 1715

ಕಾರ್ಮಿಕ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಕಾಇ 223 ಐಡಿಎಂ 2010, ಬೆಂಗಳೂರು, ದಿನಾಂಕ: 01ನೇ ಡಿಸೆಂಬರ್, 2010

ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಸೇವೆಗಳು–3) ಇವರ ಅಧಿಸೂಚನೆ ಸಂಖ್ಯೆ : ಸಿಆಸುಇ 60 ಸೇಉನ್ಯಾ 2010(2) ದಿನಾಂಕ : 29–11–2010ರಲ್ಲಿ ಕೆಳಕಂಡ ನ್ಯಾಯಾಧೀಶರನ್ನು ವರ್ಗಾವಣೆ ಮಾಡಿ ಇವರ ಸೇವೆಯನ್ನು ಕಾರ್ಮಿಕ ಇಲಾಖೆಯ ವಶಕ್ಕೆ ನೀಡಿರುವುದರಿಂದ ಈ ಕೆಳಕಂಡಂತೆ ಮರು ನೇಮಕಾತಿ ಮಾಡಿ ಆದೇಶಿಸಿದೆ.

Sl. No.	Name of the Officer	Present Charge	Charge to which posted
1	Sri. P.N. Desai	District Judge OOD, Senior Faculty Member, Karnataka Judicial Acadamy, Bangalore	Presiding Officer, Addl. Industrial Tribunal, Bangalore City

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,
ಗೋವಿಂದಸ್ವಾಮಿ,
ಪೀಠಾಧಿಕಾರಿ,
ಕಾರ್ಮಿಕ ಇಲಾಖೆ,
(ಕಾರಾವಿ ಯೋ (ವೈ) ಸೇವೆಗಳು)

ಪಿ.ಆರ್. 1716

ವಾಣಿಜ್ಯ ಮತ್ತು ಕೈಗಾರಿಕೆ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ವಾಕೈ 9 ಕೈಸೇವಿ 2010, ಬೆಂಗಳೂರು, ದಿನಾಂಕ: 26ನೇ ನವೆಂಬರ್, 2010

ಭಾಗ–1

ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಯಲ್ಲಿ ಕೆ.ಸಿ.ಎಸ್. ನಿಯಮ 32 ರಡಿಯಲ್ಲಿ ಜಂಟಿ ನಿರ್ದೇಶಕರಾಗಿ ಕರ್ತವ್ಯ ನಿರ್ವಹಿಸುತ್ತಿರುವ ಶ್ರೀ ಚಿಕ್ಕಯ್ಯ, ಇವರಿಗಿಂತ ಜೇಷ್ಠತೆಯಲ್ಲಿ ಕಿರಿಯವರಾದ ಶ್ರೀ ವಿ. ಮುನಿಯಪ್ಪ, ಜಂಟಿ ನಿರ್ದೇಶಕರು, ಇವರಿಗೆ ಸರ್ಕಾರದ ಅಧಿಸೂಚನೆ **ಸಂಖ್ಯೆ : ವಾಕೈ 230 ಕೈಸೇವಿ 2008 ರಲ್ಲಿ ಸ್ಥಾನಪನ್ನ ಬಡ್ತಿ ನೀಡಿದ ದಿನಾಂಕ : 28–03–2009**ರಿಂದಲೇ ಜಾರಿಗೆ ಬರುವಂತೆ ಶ್ರೀ ಚಿಕ್ಕಯ್ಯ, ಜಂಟಿ ನಿರ್ದೇಶಕರು, ಇವರಿಗೆ **ಕೆ.ಸಿ.ಎಸ್. ನಿಯಮ 60** ರಡಿಯಲ್ಲಿ ವೇತನ ಶ್ರೇಣಿ ರೂ. 20025–525–22650–600–26250–675–28275 ರಲ್ಲಿ ಸ್ಥಾನಪನ್ನ ಬಡ್ತಿ ನೀಡಿ ಹಾಗೂ ಹಾಲಿ ಕರ್ತವ್ಯ ನಿರ್ವಹಿಸುತ್ತಿರುವ ಕಿಲ್ಪ್, ಬೆಂಗಳೂರು ಇಲ್ಲಿ ನಿಯೋಜನೆಯ ಮೇರೆಗೆ ಮುಂದುವರೆಸಿದೆ.

ಭಾಗ–2

ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಯಲ್ಲಿ ಕೆ.ಸಿ.ಎಸ್. ನಿಯಮ 32 ರಡಿಯಲ್ಲಿ ಜಂಟಿ ನಿರ್ದೇಶಕರಾಗಿ ಕರ್ತವ್ಯ ನಿರ್ವಹಿಸುತ್ತಿರುವ ಶ್ರೀ ಟಿ. ಹೊನ್ನೂರಪ್ಪ, ಇವರಿಗೆ **ವೇತನ ಶ್ರೇಣಿ ರೂ. 20025–525–22650–600–26250–675–28275** ರ ಜಂಟಿ ನಿರ್ದೇಶಕರ ಹುದ್ದೆಗೆ ತಕ್ಷಣದಿಂದ ಜಾರಿಗೆ ಬರುವಂತೆ ಸ್ಥಾನಪನ್ನ ಬಡ್ತಿ ನೀಡಿ ಒಂದು ದಿನ ಇಲಾಖೆಯ ವೃಂದ ಬಲದ ಹುದ್ದೆಯಾದ ಶ್ರೀಮತಿ ಕೋಮಲ, ಜಂಟಿ ನಿರ್ದೇಶಕರು,

(ಎ.ಇ.ಪಿ) ಕೇಂದ್ರ ಕಚೇರಿ, ಬೆಂಗಳೂರು, ಇಲ್ಲಿ ಕಾರ್ಯ ನಿರ್ವಹಿಸುವಂತೆ ಹಾಗೂ ಮಾರನೆಯ ದಿನದಿಂದ ಅವರು ಹಾಲಿ ಕರ್ತವ್ಯ ನಿರ್ವಹಿಸುತ್ತಿರುವ ಸ್ಥಳವಾದ ವ್ಯವಸ್ಥಾಪಕ ನಿರ್ದೇಶಕರು, ಲಿಡ್ಕರ್, ಬೆಂಗಳೂರು ಇಲ್ಲಿಯೇ ನಿಯೋಜನೆ ಮೇರೆಗೆ ಮುಂದುವರೆಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,
ಎಲ್.ಎಸ್. ವಾಸನ್,
ಸರ್ಕಾರದ ಅಧೀನ ಕಾರ್ಯದರ್ಶಿ,
ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ (ಸೇವೆಗಳು)

ಪಿ.ಆರ್. 1717

ಯುವಜನ ಸೇವಾ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಯುಸೇಇ 46 ಯುಇಸೇ 2010, ಬೆಂಗಳೂರು, ದಿನಾಂಕ: 27ನೇ ನವೆಂಬರ್, 2010

ಶ್ರೀ ಸಿ.ಜಿ. ಶೆಟ್ಟರ್, ಜಂಟಿ ನಿರ್ದೇಶಕರು (ಕ್ರೀಡೆ), ಯುವಜನ ಸೇವಾ ಮತ್ತು ಕ್ರೀಡಾ ಇಲಾಖೆ, ಬೆಂಗಳೂರು, ಇವರನ್ನು ದಿನಾಂಕ : 31–12–2010ರ ಅಪರಾಹ್ನದಿಂದ ಜಾರಿಗೆ ಬರುವಂತೆ ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಯ 95 ಮತ್ತು 283ರನ್ವಯ ಸರ್ಕಾರಿ ಸೇವೆಯಿಂದ ವಯೋ ನಿವೃತ್ತಿ ಹೊಂದಲು ಅನುಮತಿ ನೀಡಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,
ಎಂ.ಎಸ್. ಶಿವರಾಮ್,
ಸರ್ಕಾರದ ಅಧೀನ ಕಾರ್ಯದರ್ಶಿ,
ಯುವಜನ ಸೇವಾ ಇಲಾಖೆ

ಪಿ.ಆರ್. 1718

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಗ್ರಾಅಪ 333 ಪಬವ 2010, ಬೆಂಗಳೂರು, ದಿನಾಂಕ: 29ನೇ ನವೆಂಬರ್, 2010

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ವ್ಯಾಪ್ತಿಯ ಕರ್ನಾಟಕ ಸಾಮಾನ್ಯ ಸೇವೆ (ಅಭಿವೃದ್ಧಿ ಶಾಖೆ ಮತ್ತು ಸ್ಥಳೀಯ ಆಡಳಿತ ಶಾಖೆ)ಗೆ ಸೇರಿದ ಗ್ರೂಪ್–ಎ ಹಿರಿಯ ಶ್ರೇಣಿ ಮತ್ತು ಕಿರಿಯ ಶ್ರೇಣಿ ವೃಂದಗಳ ಈ ಕೆಳಕಂಡ ಅಧಿಕಾರಿಗಳಿಗೆ 60 ವರ್ಷ ವಯೋಮಿತಿಯು 2011ನೇ ಸಾಲಿನಲ್ಲಿ ಪೂರ್ಣಗೊಳ್ಳುವ ಪ್ರಯುಕ್ತ ಅವರುಗಳ ಹೆಸರಿನ ಮುಂದೆ ಸೂಚಿಸಲಾಗಿರುವ ದಿನಾಂಕಗಳಂದು ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ ನಿಯಮ–95ರಂತೆ ಸರ್ಕಾರಿ ಸೇವೆಯಿಂದ ವಯೋನಿವೃತ್ತಿ ಹೊಂದಲು ಅನುಮತಿ ನೀಡಿದೆ.

ಕ್ರಮ ಸಂಖ್ಯೆ	ಅಧಿಕಾರಿಯ ಹೆಸರು ಮತ್ತು ಕರ್ತವ್ಯ ನಿರ್ವಹಿಸುತ್ತಿರುವ ಸ್ಥಳ ಶ್ರೀಯುತ	ಜನ್ಮ ದಿನಾಂಕ	60 ವರ್ಷಗಳು ತುಂಬಿ ಸರ್ಕಾರಿ ಸೇವೆಯಿಂದ ವಯೋನಿವೃತ್ತಿಯಾಗುವ ದಿನಾಂಕ
1	ಸಾಂಬಾಜಿ ಟಿಲೆ, ಉಪ ಕಾರ್ಯದರ್ಶಿ, ಜಿಲ್ಲಾ ಪಂಚಾಯತ್, ಬಿಜಾಪುರ	03–01–1951	31–01–2011
2	ಬಿ. ಅಣ್ಣಯಪ್ಪ, ಯೋಜನಾ ನಿರ್ದೇಶಕರು, ಡಿ.ಆರ್.ಡಿ.ಎ. ಕೋಶ, ಜಿಲ್ಲಾ ಪಂಚಾಯತ್, ಚಿಕ್ಕಬಳ್ಳಾಪುರ	27–01–1951	31–01–2011
3	ಜಿ.ಎಂ. ಸಿದ್ದರಾಮಯ್ಯ, ಯೋಜನಾ ನಿರ್ದೇಶಕರು, ಡಿ.ಆರ್.ಡಿ.ಎ. ಕೋಶ, ಜಿಲ್ಲಾ ಪಂಚಾಯತ್, ಬೆಂಗಳೂರು ನಗರ	09–03–1951	31–03–2011
4	ಬಿ.ಜಿ. ರವೀಂದ್ರ, ಸಹಾಯಕ ಕಾರ್ಯದರ್ಶಿ, ಜಿಲ್ಲಾ ಪಂಚಾಯತ್, ಹಾಸನ	10–03–1951	31–03–2011

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,
ಎಸ್.ಯು. ಶಿವಪ್ಪ,
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಪಿ.ಆರ್. 1719

PERSONNEL AND ADMINISTRATIVE REFORMS SECRETARIAT

NOTIFICATION

No. DPAR 604 SAS 2010, Bangalore, Dated 30th November, 2010

1. ***Smt. Meera* C. *Saxena, IAS (KN* 76), *Additional Chief Secretary to Government, Forest, Ecology & Environment Department, Bangalore*** is transferred with immediate effect and posted until further orders as ***Additional Chief Secretary to Government -cum- Development Commissioner,*** in the existing vacancy.
2. The services of ***Sri Kaushik Mukherjee, IAS (KN* 78), *Chairman* & *Managing Director, Karnataka State Finance Corporation, Bangalore*** are withdrawn from Finance Department with immediate effect and posted until further orders as ***Principal Secretary to Government, Forest, Ecology & Environment Department,*** vice Smt. Meera C. Saxena, IAS transferred.
3. The services of ***Dr S.M. Jaamdar, IAS (KN 80), Commissioner, Bangalore Metropolitan Regional Development Authority, Bangalore*** are withdrawn from Urban Development Department with immediate effect and his services are placed at the disposal of Finance Department for being posted as ***Managing Director, Karnataka State Finance Corporation, Bangalore*** vice Sri Kaushik Mukherjee, IAS transferred.
4. ***Sri Ramesh Bindurao Zalki, IAS (KN* 87), *Secretary to Government, Labour Department,*** is transferred with immediate effect and posted until further orders as ***Secretary to Government, Kannada* & *Culture, Information Department, Bangalore*** vice Sri B.R. Jayaramaraje Urs, IAS transferred.

   Sri Ramesh Bindurao Zalki, IAS (KN* 87),** is also placed in additional charge of the post of ***Secretary to Government, Labour Department, until further orders.
5. ***Sri B.R. Jayaramaraje Urs, IAS* (KN 89), *Secretary to Government, Kannada* & *Culture, Information Department, Bangalore*** is transferred with immediate effect and his services are placed at the disposal of Revenue Department for being posted as ***Managing Director, Karnataka Public Lands Corporation Limited, Bangalore,*** in the existing vacancy.

   Sri B.R.Jayaramaraje Urs, IAS is also placed in additional charge of the post of ***Executive Director, Suvarna Arogya Suraksha Trust, Bangalore*** vice Sri G.Kumar Naik, IAS transferred.
6. ***Sri G. Kumar Naik, IAS (KN 90), Executive Director, Suvarna Arogya Suraksha Trust, Bangalore,*** is transferred with immediate effect and posted until further orders as ***Secretary to Government, Education Department (Primary* & *Secondary Education),*** vice Dr. R.G.Nadadur, IAS transferred.
7. ***Dr N. V. Prasad, IAS (KN 2004), waiting for posting,*** is posted with immediate effect and until further orders as ***Additional Director, Food* & *Civil Supplies Department, Bangalore,*** in the existing vacancy.

   Dr. N.V.Prasad, IAS is also placed in concurrent charge of the post of Commissioner, Food, Civil Supplies & Consumer Affairs Department, Bangalore with immediate effect & until further orders.
8. ***Sri L V. Nagarajan, IAS (KN* 79), *Principal Secretary to Government, Finance Department*** is placed in additional charge of the post of ***Chairman, Karnataka State Finance Corporation, Bangalore*** until further orders vice Sri Kaushik Mukherjee. IAS transferred.
9. ***Sri Subir Hari Singh*, *IAS* (KN 76), *Additional Chief Secretary to Government, Urban Development Department*** is placed in additional charge of the post of ***Commissioner, Bangalore Metropolitan Regional Development Authority, Bangalore*** until further orders vice Dr S.M.Jaamdar, IAS transferred.
10. ***Sri Rajeev Chawla, IAS (KN* 87), *Managing Director, Karnataka State Co-operative Marketing Federation, Bangalore*** is placed in additional charge of the post of ***Special Secretary to Government, Revenue Department (Bhoomi* & *Registration of Urban Properties)*** with immediate effect and until further orders.

By Order and in the name of the Governor of Karnataka,
K.G. ANANTHA,
Under Secretary to Government,
DP & AR (Services-I).

P.R. 1720

NOTIFICATION

No. DPAR 676 SAS 2010, Bangalore, Dated 30th November, 2010

Sri Ajay Seth, IAS (KN* 87), *Secretary to Government, Finance Department (B&R) is placed in additional charge of the post of ***Managing Director, Karnataka State Beverages Corporation Limited, Bangalore,*** until further orders vice Dr. H.Shashidhar, IAS retiring on superannuation on 30-11-2010.

Sri K.S. Prabhakara, IAS (KN* 91), *Secretary to Government, Revenue Department (Disaster Management) is placed in additional charge of the post of ***Regional Commissioner, Bangalore Division, Bangalore,*** until further orders vice Sri G.M. Dhananjaya, IAS retiring on superannuation on 30-11-2010.

By Order and in the name of the Governor of Karnataka,
K.G. ANANTHA,
Under Secretary to Government,
DP & AR (Services-I).

P.R. 1721

ಒಳಾಡಳಿತ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಒಇ 115 ಪೊಪೆಸೆ 2010, ಬೆಂಗಳೂರು, ದಿನಾಂಕ: 01ನೇ ಡಿಸೆಂಬರ್, 2010

ಸರ್ಕಾರಿ ಲೋಕೋಪಯೋಗಿ ಜ್ಞಾಪನಾ ಪತ್ರ ಸಂಖ್ಯೆ : ಸಿಬಿಎಸ್/62/ಕಿ.ಇಂ./ಟಿಆರ್‌ಎಫ್/ಇಎಸ್‌ಇ/2010–11, ದಿನಾಂಕ : 14–07–2010ರಲ್ಲಿ ಶ್ರೀ ರವಿ ಆನಂದರಾವ್, ಕಿರಿಯ ಇಂಜಿನಿಯರ್, ಇವರನ್ನು ಮರು ಸ್ಥಳನಿಯುಕ್ತಿಗೊಳಿಸಲು ಒಳಾಡಳಿತ ಇಲಾಖೆಯ ವಶಕ್ಕೆ ನೀಡಿದ್ದು, ಸದರಿಯವರನ್ನು ಕರ್ನಾಟಕ ರಾಜ್ಯ ಪೊಲೀಸ್ ಗೃಹ ನಿರ್ಮಾಣ ನಿಗಮ ನಿಯಮಿತಕ್ಕೆ ನೇಮಕ ಮಾಡಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,
ಟಿ.ಎನ್. ರವಿಪ್ರಕಾಶ್,
ಸರ್ಕಾರದ ಅಧೀನ ಕಾರ್ಯದರ್ಶಿ,
ಒಳಾಡಳಿತ ಇಲಾಖೆ (ಪೊಲೀಸ್ ಸೇವೆಗಳು)

ಪಿ.ಆರ್. 1722

ಅಧಿಸೂಚನೆ

ಸಂಖ್ಯೆ: ಒಇ 142 ಪೊಪೆಸೆ 2010, ಬೆಂಗಳೂರು, ದಿನಾಂಕ: 01ನೇ ಡಿಸೆಂಬರ್, 2010

ಸರ್ಕಾರಿ ಲೋಕೋಪಯೋಗಿ ಅಧಿಸೂಚನೆ/ಜ್ಞಾಪನಾ ಸಂಖ್ಯೆ : ಲೋಇ 546 ಸೇಸಎ 2010, ದಿನಾಂಕ : 11–08–2010ರಲ್ಲಿ ಶ್ರೀ ಕೊಟ್ರಣ್ಣವರ, ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಇವರನ್ನು ಮರು ಸ್ಥಳನಿಯುಕ್ತಿಗೊಳಿಸಲು ಒಳಾಡಳಿತ ಇಲಾಖೆಯ ವಶಕ್ಕೆ ನೀಡಿದ್ದು, ಸದರಿಯವರನ್ನು ಕರ್ನಾಟಕ ರಾಜ್ಯ ಪೊಲೀಸ್ ಗೃಹ ನಿರ್ಮಾಣ ನಿಗಮ ನಿಯಮಿತಕ್ಕೆ ನೇಮಕ ಮಾಡಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,
ಟಿ.ಎನ್. ರವಿಪ್ರಕಾಶ್,
ಸರ್ಕಾರದ ಅಧೀನ ಕಾರ್ಯದರ್ಶಿ,
ಒಳಾಡಳಿತ ಇಲಾಖೆ (ಪೊಲೀಸ್ ಸೇವೆಗಳು)

ಪಿ.ಆರ್. 1723

ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಸಿಆಸುಇ 449 ಸಅಸೇ 2010, ಬೆಂಗಳೂರು, ದಿನಾಂಕ: 03ನೇ ಡಿಸೆಂಬರ್, 2010

ಶ್ರೀ ಕೆ.ಎಸ್. ವೇಣುಗೋಪಾಲ್, ಸರ್ಕಾರದ ಉಪ ಕಾರ್ಯದರ್ಶಿ, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ) ಇವರನ್ನು ಸಾರ್ವಜನಿಕ ಹಾಗೂ ಆಡಳಿತಾತ್ಮಕ ಹಿತದೃಷ್ಟಿಯಿಂದ ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಸರ್ಕಾರದ ಉಪಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ (ಜನಸ್ಪಂದನ ಕೋಶ) – ಶ್ರೀ ಪಿ.ಕೆ. ಬಾಬುರಾವ್ ಅವರ ನಿವೃತ್ತಿಯಿಂದ ತೆರವಾಗಿರುವ ಹುದ್ದೆಗೆ ವರ್ಗಾಯಿಸಿ ನೇಮಿಸಲಾಗಿದೆ.

<u>ಭಾಗ</u>

ಶ್ರೀ ಕೆ. ರಹಮತ್ ಉಲ್ಲಾ, ಸರ್ಕಾರದ ಅಧೀನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ (ಶಿಷ್ಟಾಚಾರ), ಕರ್ನಾಟಕ ಸರ್ಕಾರ ಸಚಿವಾಲಯ ಇವರಿಗೆ ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ವೇತನ ಶ್ರೇಣಿ **ರೂ. 20025–525–22650–600–26250–675–28275ರ** ಉಪಕಾರ್ಯದರ್ಶಿ ಹುದ್ದೆಗೆ ಸ್ಥಾನಪನ್ನ ಬಡ್ತಿ ನೀಡಿ ಸರ್ಕಾರದ ಉಪ ಕಾರ್ಯದರ್ಶಿ, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ)– ಶ್ರೀ ಕೆ.ಎಸ್. ವೇಣುಗೋಪಾಲ್ ಇವರ ವರ್ಗಾವಣೆಯಿಂದ ತೆರವಾಗಿರುವ ಹುದ್ದೆಗೆ ನೇಮಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,
ಎ.ಆರ್. ವಿಜಯಾನಂದ ಶರ್ಮ,
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಸೇವೆಗಳು–3)

ಪಿ.ಆರ್. 1724